# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 980
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 14.12.2023
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ಜಿಲ್ಲೆಯಲ್ಲಿ ಮಾದಕ (ದ್ರವ್ಯ) ವಸ್ತುಗಳ ಮಾರಾಟ ಜಾಲ ಸಕ್ರಿಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು; | ಕೋಲಾರ ಜಿಲ್ಲೆಯಲ್ಲಿ ಮಾದಕ ವಸ್ತುಗಳನ್ನು ಮಾರಾಟ ಮಾಡುವವರನ್ನು ಪತ್ತೆ ಹಚ್ಚಿ ಪ್ರಕರಣಗಳನ್ನು ದಾಖಲಿಸಿ ಕಾನೂನು ರೀತ್ಯಾ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ.<br><br>ಕೋಲಾರ ಜಿಲ್ಲೆಯಲ್ಲಿ ಮಾದಕ(ದ್ರವ್ಯ) ವಸ್ತುಗಳ ನಿಯಂತ್ರಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br><br>➢ ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ **1908**ನ್ನು ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆ ಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್.ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➢ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ,<br>➢ ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ |

ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ದುಷ್ಪರಿಣಾಮಗಳ ಬಗ್ಗೆ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ.

- ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು. ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.
- ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ನಡೆಸಿ, ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
- ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.
- ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್ಸ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances Act, 1988"ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತು.
- ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

| | | |
|---|---|---|
| | | ➤ ಕೊರಿಯರ್ಸ್ / ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>➤ ಕೋಲಾರ ಜಿಲ್ಲೆಯಲ್ಲಿ ಸೈಬರ್ ಎಕಾನಾಮಿಕ್ & ನಾರ್ಕೊಟಿಕ್ ಪೊಲೀಸ್ ಠಾಣೆ (CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯ ನಿರ್ವಹಿಸುತ್ತಿದೆ. |
| ಆ) | ಇತ್ತೀಚೆಗೆ ಜಿಲ್ಲೆಯಲ್ಲಿ ನಡೆದಿರುವ ಅಪರಾದ ಪ್ರಕರಣಗಳಿಗೂ (ಕೊಲೆ, ದರೋಡೆ, ಅತ್ಯಾಚಾರ) ಮತ್ತು ಈ ಮಾದಕ ವಸ್ತುಗಳ ಸರಬರಾಜುಗಳ ಜಾಲಕ್ಕೂ ಸಂಬಂಧವಿದೆಯೇ; ಇದ್ದಲ್ಲಿ ವಿವರಗಳನ್ನು ನೀಡುವುದು; | ಕೋಲಾರ ಜಿಲ್ಲೆಯಲ್ಲಿ ನಡೆದಿರುವ ಅಪರಾಧ ಪ್ರಕರಣಗಳಿಗೂ (ಕೊಲೆ, ದರೋಡೆ, ಅತ್ಯಾಚಾರ) ಮತ್ತು ಮಾದಕ ವಸ್ತುಗಳ ಸರಬರಾಜು ಜಾಲಕ್ಕೂ ಸಂಬಂಧ ಇರುವ ಬಗ್ಗೆ ನಡೆಸಿದ ತನಿಖೆಗಳಿಂದ ದೃಡಪಟ್ಟಿರುವುದಿಲ್ಲ. |
| ಇ) | ಇತ್ತೀಚೆಗೆ ಕೋಲಾರ ನಗರದಲ್ಲಿ ಅಪ್ರಾಪ್ತ ಬಾಲಕನ ಕೊಲೆಯಲ್ಲಿ ಭಾಗಿಯಾಗಿದ್ದ, ಎಲ್ಲಾ ಅಪರಾಧಿಗಳು ಮಾದಕ ದ್ರವ್ಯ ಸೇವನೆ ಮಾಡಿದ್ದರೆಂದು ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪ್ರಕರಣಗಳ ಕುರಿತು ತೆಗೆದುಕೊಂಡ ಕ್ರಮಗಳ ವಿವರಗಳನ್ನು ನೀಡುವುದು? | ಕೋಲಾರ ನಗರದಲ್ಲಿ ಅಪ್ರಾಪ್ತ ಬಾಲಕನ ಕೊಲೆಯಲ್ಲಿ ಭಾಗಿಯಾಗಿರುವ ಅಪರಾಧಿಗಳು ಮಾದಕ ದ್ರವ್ಯ ಸೇವಿಸಿರುವ ಬಗ್ಗೆ ದೃಢಪಟ್ಟಿರುವುದಿಲ್ಲ.<br><br>ಸದರಿ ಪ್ರಕರಣದಲ್ಲಿ ಒಟ್ಟು 8 ಜನರು ಭಾಗಿಯಾಗಿದ್ದು, 4 ಜನರು ಸಂಘರ್ಷಕ್ಕೆ ಒಳಪಟ್ಟ ಬಾಲಕರಾಗಿರುತ್ತಾರೆ. ಸಂಘರ್ಷಕ್ಕೆ ಒಳಪಟ್ಟ ನಾಲ್ವರ ಪೈಕಿ ಇಬ್ಬರನ್ನು ವಶಕ್ಕೆ ಪಡೆದು ಬಾಲ ನ್ಯಾಯಮಂಡಳಿಗೆ ಒಪ್ಪಿಸಲಾಗಿರುತ್ತದೆ. 4 ಜನ ಆರೋಪಿಗಳ ಪ್ರಾಪ್ತರಾಗಿದ್ದು ದಸ್ತಗಿರಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಸದರಿ ಪ್ರಕರಣವು ಹಾಲಿ ತನಿಖೆಯಲ್ಲಿರುತ್ತದೆ. ತನಿಖೆಯ ವೇಳೆಯಲ್ಲಿ ಅಪ್ರಾಪ್ತ ವಯಸ್ಕರು ಮದ್ಯಪಾನ ಸೇವನೆ ಮಾಡಿರುವುದು ದೃಢಪಟ್ಟಿರುತ್ತದೆ. ಆದರೆ ಗಾಂಜಾ/ಮಾದಕ ದ್ರವ್ಯಗಳ ಸೇವನೆ ಮಾಡಿರುವ ಬಗ್ಗೆ ದೃಢಪಟ್ಟಿರುವುದಿಲ್ಲ. |

ಒಇ 33 ಪಿಎನ್‌ಡಿ 2023(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು